**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ:02:ಸುತ್ತೋಲೆ:ಆಯವ್ಯಯ:2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:05.06.2018

**ಇವರಿಗೆ:**

ಜಂಟಿ ನಿರ್ದೇಶಕರು
ಕಾಲೇಜು ಶಿಕ್ಷಣ ಇಲಾಖೆ
ಪ್ರಾದೇಶಿಕ ಕಛೇರಿ
ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು,
ಧಾರವಾಡ & ಕಲಬುರಗಿ

ಮಾನ್ಯರೆ,

ವಿಷಯ ಜೂನ್-2018 ರಿಂದ ಆಗಸ್ಟ್-2018ರ ಮಾಹೆಗೆ ಅವಶ್ಯವಿರುವ ಅನುದಾನದ ಮಾಹಿತಿಯನ್ನು ಸಲ್ಲಿಸುವ ಕುರಿತು.

ಉಲ್ಲೇಖ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 06 ಎಸ್‌ಆರ್‌ಪಿ 2018 ದಿನಾಂಕ 19.04.2018

****

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ, ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ತಮ್ಮ ಕಛೇರಿಯ ವ್ಯಾಪ್ತಿಯಡಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಮತ್ತು ಬಿ.ಎಡ್. ಕಾಲೇಜುಗಳು ಮತ್ತು ಖಾಸಗಿ ಅನುದಾನಿತ ಕಾನೂನು ಕಾಲೇಜುಗಳಿಗೆ ಸಂಬಂಧಿಸಿದಂತೆ, ಸದರಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಕ್ರಮವಾಗಿ ಜೂನ್-2018 ರಿಂದ ಆಗಸ್ಟ್-2018ರ ಮಾಹೆಗೆ ಮತ್ತು ಏಪ್ರಿಲ್-2018 ರಿಂದ ಜೂನ್-2018ರ ಮಾಹೆಗೆ ವೇತನಪಾವತಿಗಾಗಿ ಅವಶ್ಯವಿರುವ ಮಾಹಿತಿಯನ್ನು ಕಾಲೇಜುವಾರು ಸಿದ್ಧಪಡಿಸಿ ದಿನಾಂಕ:20.06.2018ರೊಳಗೆ ಈ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

ಮುಂದುವರೆದು, ಉಲ್ಲೇಖಿತ ಸರ್ಕಾರದ ಆದೇಶದಲ್ಲಿ 2017ರ ಪರಿಷ್ಕೃತ ರಾಜ್ಯ ವೇತನ ಶ್ರೇಣಿಯನ್ನು ಜಾರಿಗೊಳಿಸಿ ಆದೇಶಿಸಲಾಗಿದ್ದು, ಅದರಂತೆ ಖಾಸಗಿ ಅನುದಾನಿತ ಪದವಿ, ಬಿ.ಎಡ್ ಮತ್ತು ಕಾನೂನು ಕಾಲೇಜುಗಳ ಬೋಧಕೇತರ ಸಿಬ್ಬಂದಿಗಳಿಗೆ ಪರಿಷ್ಕೃತ ವೇತನ ಶ್ರೇಣಿಯಲ್ಲಿ ವೇತನವನ್ನು ನಿಗಧಿಪಡಿಸಿ ಈ ಸಂಬಂಧ 2018ರ ಏಪ್ರಿಲ್ ರಿಂದ ಅವಶ್ಯವಿರುವ ಅನುದಾನದ ಮಾಹಿತಿಯನ್ನು ಕಾಲೇಜುವಾರು ಮತ್ತು ಮಾಹೆವಾರು ವಿವರದೊಂದಿಗೆ ಈ ಕಛೇರಿಗೆ ತುರ್ತಾಗಿ ಸಲ್ಲಿಸಲು ಸೂಚಿಸಿದೆ.

ತಮ್ಮ ವಿಶ್ವಾಸಿ,

ಕಾಲೇಜು ಶಿಕ್ಷಣ ನಿರ್ದೇಶಕರು

ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ
ಹುಣಸೂರು/ವಿನೋಬ ರಸ್ತೆ, ಮೈಸೂರು
ದಿನಾಂಕ: 06-06-2018

ಸಂಖ್ಯೆ : ಪ್ರಾಕಮೈ/ಕಾಶಿಇ/12/ಅನುದಾನ:ಸುತ್ತೋಲೆ/2018-19

**ಪರಿಚಲನಾದೇಶ**

ಮೇಲಿನ ಆಯುಕ್ತರ ಪತ್ರದಲ್ಲಿ ಸೂಚಿಸಿರುವಂತೆ ಈ ಕಛೇರಿ ವ್ಯಾಪ್ತಿಗೊಳಪಡುವ ಖಾಸಗಿ ಅನುದಾನಿತ ಪದವಿ, ಬಿ.ಎಡ್ ಹಾಗೂ ಕಾನೂನು ಕಾಲೇಜುಗಳ ಅರ್ಹ ಬೋಧಕೇತರ ನೌಕರರ 2017ರ ಪರಿಷ್ಕೃತ ರಾಜ್ಯ ವೇತನ ಶ್ರೇಣಿಯನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 06 ಎಸ್‌ಆರ್‌ಪಿ 2018 ದಿನಾಂಕ: 19-04-2018 ರನುಸಾರ ವೇತನವನ್ನು ನಿಗಧಿಪಡಿಸಿ ಪ್ರಸ್ತಾವನೆಯನ್ನು ದಿನಾಂಕ: 11-06-2018 ರ ಒಳಗಾಗಿ ಸಲ್ಲಿಸಿ ಅನುಮೋದನೆಯನ್ನು ಪಡೆದುಕೊಳ್ಳುವಂತೆ ಸೂಚಿಸಿದೆ.

ಜಂಟಿ ನಿರ್ದೇಶಕರು

ಇವರಿಗೆ,

1. ಈ ಕಛೇರಿ ವ್ಯಾಪ್ತಿಗೊಳಪಡುವ ಖಾಸಗಿ ಅನುದಾನಿತ ಪದವಿ, ಬಿ.ಎಡ್ ಹಾಗೂ ಕಾನೂನು ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಮಾಹಿತಿ ಹಾಗೂ ತುರ್ತು ಕ್ರಮಕ್ಕಾಗಿ

ಪ್ರತಿ:

1 ಮಾನ್ಯ ಆಯುಕ್ತರು ಕಾಲೇಜು ಶಿಕ್ಷಣ ಇಲಾಖೆ ಬೆಂಗಳೂರು ಇವರಿಗೆ ಮಾಹಿತಿ ಹಾಗು ಅವಗಾಹನೆಗಾಗಿ.
2 .ಈ ಕಛೇರಿಯ ಸಹಾಯಕ ನಿರ್ದೇಶಕರು, ವ್ಯವಸ್ಥಾಪಕರು, ಅಧೀಕ್ಷಕರು ಹಾಗೂ ಎಲ್ಲಾ ವಿಷಯ ನಿರ್ವಾಹಕರುಗಳಿಗೆ ಮಾಹಿತಿ ಹಾಗೂ ಕ್ರಮಕ್ಕಾಗಿ
3 .ಕಛೇರಿ ಪ್ರತಿ.